# Akashvani : Bangalore
# National Bulletin In Kannada
# 14.08.2024 / 7.35 am

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

<><*<><>*><>

<u>ಮುಖ್ಯಾಂಶಗಳು</u>

<><*<><>*><>

೧. ೭೮ನೇ ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆ ಇಂದು ರಾಷ್ಟ್ರದ ಜನತೆಯನ್ನುದ್ದೇಶಿಸಿ ರಾಷ್ಟ್ರಪತಿ ದ್ರೌಪದಿ ಮುರ್ಮು ಭಾಷಣ

೨. ಬಡತನ ಮುಕ್ತ ಗ್ರಾಮಗಳನ್ನು ಸಾಧಿಸಲು ಸರ್ಕಾರ ಬದ್ಧ: ಶಿವರಾಜ್ ಸಿಂಗ್ ಚೌಹಾಣ್

೩. ಸಣ್ಣ ಮತ್ತು ಮಧ್ಯಮ ಉದ್ಯಮಗಳಲ್ಲಿ ಸಹಕಾರ ಉತ್ತೇಜಿಸಲು ಭಾರತ -ಅಮೆರಿಕ ಒಪ್ಪಂದಕ್ಕೆ ಸಹಿ

೪. ಡಿಆರ್‌ಡಿಒ ದಿಂದ ಲಾಂಗ್ ರೇಂಜ್ ಗ್ಲೈಡ್ ಬಾಂಬ್ ಗೌರವ್ ಯಶಸ್ವಿ ಪರೀಕ್ಷೆ

೫. ಭಾರತದ ಮಹಿಳಾ ಕುಸ್ತಿಪಟು ವಿನೇಶ್ ಫೋಗಟ್ ಸಿಎಎಸ್‌ಗೆ ಸಲ್ಲಿಸಿದ್ದ ಮೇಲ್ಮನವಿ ತೀರ್ಪು ಆಗಸ್ಟ್ ೧೬ಕ್ಕೆ ಮುಂದೂಡಿಕೆ

<><*<><>*><>

ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ೭೮ ನೇ ಸ್ವಾತಂತ್ರ್ಯ ದಿನಾಚರಣೆಯ ಮುನ್ನಾದಿನವಾದ ಇಂದು ದೇಶವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಸಂಜೆ ೭ ಗಂಟೆಗೆ ಭಾಷಣ, ಆಕಾಶವಾಣಿಯ ಎಲ್ಲ ರಾಷ್ಟ್ರೀಯ ನೆಟ್‌ವರ್ಕ್‌ನಲ್ಲಿ ಮತ್ತು ದೂರದರ್ಶನದ ಎಲ್ಲಾ ಚಾನೆಲ್‌ಗಳಲ್ಲಿ ಹಿಂದಿಯಲ್ಲಿ, ನಂತರ ಇಂಗ್ಲಿಷ್ ಆವೃತ್ತಿಯಲ್ಲಿ ಪ್ರಸಾರ ಮಾಡಲಾಗುತ್ತದೆ. ಬಳಿಕ ದೂರದರ್ಶನದ ಪ್ರಾದೇಶಿಕ ಚಾನಲ್‌ಗಳಿಂದ ಪ್ರಾದೇಶಿಕ ಭಾಷೆಗಳಲ್ಲಿ ಭಾಷಣ ಪ್ರಸಾರವಾಗಲಿದೆ. ಆಕಾಶವಾಣಿ ತನ್ನ ಪ್ರಾದೇಶಿಕ ನೆಟ್‌ವರ್ಕ್‌ಗಳಲ್ಲಿ ರಾತ್ರಿ ೯:೩೦ ಗಂಟೆಗೆ ಪ್ರಾದೇಶಿಕ ಭಾಷಾ ಆವೃತ್ತಿಗಳನ್ನು ಪ್ರಸಾರ ಮಾಡಲಿದೆ.

<><*<><>*><>

ದೆಹಲಿಯ ಕೆಂಪುಕೋಟೆಯಲ್ಲಿ ಆಚರಿಸಲಿರುವ ಈ ಬಾರಿಯ ೭೮ನೇ ಸ್ವಾತಂತ್ರ್ಯ ದಿನಾಚರಣೆಗೆ ವಿಶೇಷ ಅತಿಥಿಗಳಾಗಿ ಪಂಚಾಯತ್ ರಾಜ್ ಸಂಸ್ಥೆಗಳ ಮಹಿಳಾ ಪ್ರತಿನಿಧಿಗಳು ಸೇರಿದಂತೆ ೪೦೦ ಚುನಾಯಿತ ಪ್ರತಿನಿಧಿಗಳನ್ನು ಕೇಂದ್ರ ಸರ್ಕಾರ ಆಹ್ವಾನಿಸಿದೆ. ಏತನ್ಮಧ್ಯೆ, ಪಂಚಾಯತ್ ರಾಜ್ ಸಚಿವಾಲಯ, ಇಂದು ನವದೆಹಲಿಯಲ್ಲಿ ಪಂಚಾಯತಿಗಳಲ್ಲಿ ಮಹಿಳಾ ನಾಯಕತ್ವದ ಕುರಿತು ರಾಷ್ಟ್ರೀಯ ಕಾರ್ಯಾಗಾರವನ್ನು ಆಯೋಜಿಸಿದೆ. ಈ ಕಾರ್ಯಾಗಾರದಲ್ಲಿ ಮಹಿಳಾ ನಾಯಕಿಯರ ಸವಾಲುಗಳು, ಅವಕಾಶಗಳ ಅನ್ವೇಷಣೆ, ಯಶಸ್ಸಿನ ಕಥೆಗಳನ್ನು ಪ್ರದರ್ಶಿಸುವುದು ಮತ್ತು ಸ್ಥಳೀಯ ಆಡಳಿತದಲ್ಲಿ ಮಹಿಳೆಯರ ಭಾಗವಹಿಸುವಿಕೆಯನ್ನು ಹೆಚ್ಚಿಸುವ ಕಾರ್ಯತಂತ್ರಗಳನ್ನು ಚರ್ಚಿಸಲಾಗುತ್ತದೆ. ಎಲ್ಲಾ ಆಹ್ವಾನಿತ ಪಂಚಾಯತ್ ರಾಜ್ ಪ್ರತಿನಿಧಿಗಳು ಈ ಕಾರ್ಯಾಗಾರದಲ್ಲಿ ಭಾಗವಹಿಸಲಿದ್ದು, ಕೇಂದ್ರ ಪಂಚಾಯತ್ ರಾಜ್ ಸಚಿವ ರಾಜೀವ್ ರಂಜನ್ ಸಿಂಗ್ ಮತ್ತು ಪಂಚಾಯತ್ ರಾಜ್ ರಾಜ್ಯ ಸಚಿವ ಪ್ರೊಫೆಸರ್ ಎಸ್.ಪಿ.ಸಿಂಗ್ ಬಾಘೇಲ್ ಅವರು ಇಂದು ಆಹ್ವಾನಿತರನ್ನು ಸನ್ಮಾನಿಸಲಿದ್ದಾರೆ.

ಸಮಾರಂಭದಲ್ಲಿ, ಭಾಷಿಣಿ ಸಹಯೋಗದಲ್ಲಿ ಬಹುಭಾಷಾ **eGramSwaraj** ವೇದಿಕೆಯನ್ನು ಪ್ರಾರಂಭಿಸಲಾಗುವುದು. ಈ ಉಪಕ್ರಮ ಎಲ್ಲಾ ಇಪ್ಪತ್ತೆರಡು ನಿಗದಿತ ಭಾರತೀಯ ಭಾಷೆಗಳಲ್ಲಿ ಪೋರ್ಟಲ್‌ಗೆ ಪ್ರವೇಶಿಸಲು ಅನುವು ಮಾಡಿಕೊಡಲಿದೆ

**<><*<><>*><>**

ಅರುಣಾಚಲ ಪ್ರದೇಶದಲ್ಲಿ 'ಹರ್ ಘರ್ ತಿರಂಗಾ' ಅಭಿಯಾನದ ಅಡಿಯಲ್ಲಿ ಆರು ನೂರು ಅಡಿ ಉದ್ದದ ರಾಷ್ಟ್ರ ಧ್ವಜವನ್ನು ಹೊತ್ತಿರುವ ತಿರಂಗಾ ರ್‍ಯಾಲಿ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಸಂತಸ ವ್ಯಕ್ತಪಡಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮ ಪೋಸ್ಟ್‌ನಲ್ಲಿ, ಅರುಣಾಚಲ ಪ್ರದೇಶ ಪ್ರತಿಯೊಬ್ಬ ನಾಗರಿಕನ ಹೃದಯದಲ್ಲಿ ದೇಶಭಕ್ತಿ ಆಳವಾಗಿ ಬೇರೂರಿರುವ ಭೂಮಿಯಾಗಿದೆ ಮತ್ತು ಇದು ರಾಜ್ಯದ ರೋಮಾಂಚಕ ಸಾಂಸ್ಕೃತಿಕ ಪರಂಪರೆಯನ್ನು ಸ್ಪಷ್ಟವಾಗಿ ಪ್ರತಿಬಿಂಬಿಸುತ್ತದೆ. 'ಹರ್ ಘರ್ ತಿರಂಗಾ' ಅಭಿಯಾನದ ಬಗ್ಗೆ ಜನತೆ ಉತ್ಸುಕತೆ ತೋರುತ್ತಿರುವುದು ನನಗೆ ಸಂತಸ ತಂದಿದೆ ಎಂದು ಪ್ರಧಾನಿ ಹೇಳಿದ್ದಾರೆ. ಇನ್ನೊಂದೆಡೆ ಹರಿಯಾಣ ಮುಖ್ಯಮಂತ್ರಿ ನಯಾಬ್ ಸಿಂಗ್ ಸೈನಿ ಅವರು, ಕರ್ನಾಲ್‌ನಲ್ಲಿ ಆಯೋಜಿಸಿದ್ದ 'ತಿರಂಗಾ ಯಾತ್ರೆ'ಯಲ್ಲಿ ಭಾಗವಹಿಸಿದ್ದರು. ನಗರದ ವಿವಿಧ ಸ್ಥಳಗಳಲ್ಲಿ "ಭಾರತ್ ಮಾತಾ ಕಿ ಜೈ" ಎಂದು ಘೋಷಣೆ ಕೂಗುತ್ತಾ ಹೆಚ್ಚಿನ ಸಂಖ್ಯೆಯಲ್ಲಿ ಜನರು ಯಾತ್ರೆಯಲ್ಲಿ ಪಾಲ್ಗೊಂಡರು. ಇದೇ ವೇಳೆ ಜಮ್ಮು ಮತ್ತು ಕಾಶ್ಮೀರದ ರಿಯಾಸಿ ಜಿಲ್ಲೆಯ ಚೆನಾಬ್ ನದಿಯ ಮೇಲಿನ ವಿಶ್ವದ ಅತಿ ಎತ್ತರದ ರೈಲ್ವೆ ಸೇತುವೆಯ ಮೇಲೆ ನಿನ್ನೆ ೭೫೦ ಮೀಟರ್ ಉದ್ದದ ತ್ರಿವರ್ಣ ಧ್ವಜದೊಂದಿಗೆ ತಿರಂಗಾ ಯಾತ್ರೆಯನ್ನು ಆರಂಭಿಸಲಾಯಿತು. ರಾಜಸ್ಥಾನದಲ್ಲಿ ಮುಖ್ಯಮಂತ್ರಿ ಭಜನ್ ಲಾಲ್ ಶರ್ಮಾ ಅವರು ಜೈಪುರದಲ್ಲಿ ನಡೆದ 'ಹರ್ ಘರ್ ತಿರಂಗ ಅಭಿಯಾನ'ದ ಅಡಿಯಲ್ಲಿ ತಿರಂಗಾ ಯಾತ್ರೆಯಲ್ಲಿ ಪಾಲ್ಗೊಂಡರು.

**<><*<><>*><>**

ಬಡತನ ಮುಕ್ತ ಗ್ರಾಮಗಳನ್ನು ಸಾಧಿಸಲು ಸರ್ಕಾರ ಬದ್ಧವಾಗಿದೆ ಎಂದು ಕೇಂದ್ರ ಗ್ರಾಮೀಣಾಭಿವೃದ್ಧಿ ಸಚಿವ ಶಿವರಾಜ್ ಸಿಂಗ್ ಚೌಹಾಣ್ ಹೇಳಿದ್ದಾರೆ. ಈ ಗುರಿಯನ್ನು ಸಾಧಿಸಲು ಜನರಲ್ಲಿ ಕೌಶಲ್ಯ ಮತ್ತು ಸಾಮರ್ಥ್ಯವನ್ನು ಬೆಳೆಸುವ ಅಗತ್ಯತೆಯನ್ನು ಅವರು ಒತ್ತಿ ಹೇಳಿದರು. ಹೈದರಾಬಾದ್‌ನಲ್ಲಿರುವ ರಾಷ್ಟ್ರೀಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆಯ ಸಾಮಾನ್ಯ ಸಭೆಯ ನಂತರ ಅವರು ಅಧಿಕಾರಿಗಳು ಹಾಗೂ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಅವರು ಮಾತನಾಡಿದರು. ಗ್ರಾಮೀಣಾಭಿವೃದ್ಧಿ ಸರ್ಕಾರದ ಆದ್ಯತೆಯಾಗಿದೆ ಎಂದು ಹೇಳಿದ ಸಚಿವರು, ಗ್ರಾಮೀಣ ಪ್ರದೇಶಗಳು ಮತ್ತು ಗ್ರಾಮಗಳಿಗೆ ರಸ್ತೆ ಸಂಪರ್ಕ, ಕುಡಿಯುವ ನೀರು ಮತ್ತು ವಿದ್ಯುತ್ ಪೂರೈಕೆಯನ್ನು ಒದಗಿಸಲಾಗುತ್ತಿದೆ ಎಂದು ಹೇಳಿದರು. ಗ್ರಾಮೀಣಾಭಿವೃದ್ಧಿಗೆ ಉದ್ಯೋಗವನ್ನು ಒದಗಿಸುವುದು ಅತ್ಯಂತ ಪ್ರಮುಖವಾಗಿದ್ದು, ದೇಶದ ೧೦ ಕೋಟಿ ಮಹಿಳೆಯರು ದೇಶದ ಬದಲಾಗುತ್ತಿರುವ ಆರ್ಥಿಕತೆಯಲ್ಲಿ ನಿರ್ಣಾಯಕ ಪಾತ್ರವನ್ನು ವಹಿಸುವ ಮೂಲಕ ಕೌಶಲ್ಯಗಳನ್ನು ಪಡೆದುಕೊಂಡಿದ್ದಾರೆ. ಬಡತನ ಮುಕ್ತ ಗ್ರಾಮ ತಮ್ಮ ಕನಸಾಗಿದ್ದು, ಈ ನಿಟ್ಟಿನಲ್ಲಿ ಸ್ವಾವಲಂಬಿ ಗ್ರಾಮವನ್ನು ಸಾಧಿಸುವುದು ಕಷ್ಟವೇನಲ್ಲ ಎಂದರು.

**<><*<><>*><>**

ಸಣ್ಣ ಮತ್ತು ಮಧ್ಯಮ ಗಾತ್ರದ ಉದ್ಯಮಗಳ ಸಹಕಾರವನ್ನು ಉತ್ತೇಜಿಸಲು ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ ಸಚಿವಾಲಯವು ಅಮೆರಿಕಾದ ಸಣ್ಣ ವ್ಯಾಪಾರ ಆಡಳಿತದೊಂದಿಗೆ ಒಪ್ಪಂದಕ್ಕೆ ಸಹಿ ಹಾಕಿದೆ. ನವದೆಹಲಿಯಲ್ಲಿ ನಿನ್ನೆ ಸಚಿವಾಲಯದ ಕಾರ್ಯದರ್ಶಿ ಎಸ್.ಸಿ.ಎಲ್ ದಾಸ್ ಮತ್ತು ಅಮೆರಿಕಾದ ಎಸ್‌ಬಿಎ ಆಡಳಿತಾಧಿಕಾರಿ ಇಸಾಬೆಲ್ ಕ್ಯಾಸಿಲ್ಲಾಸ್ ಗುಜ್ಮನ್ ಒಪ್ಪಂದಕ್ಕೆ ಸಹಿ ಹಾಕಿದರು. ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳಿಗೆ ಸಂಬಂಧಿಸಿದ ಸಮಸ್ಯೆಗಳನ್ನು ಚರ್ಚಿಸಲು

ಮತ್ತು ಸಹಕಾರದ ಸಾಧ್ಯತೆಗಳನ್ನು ಅನ್ವೇಷಿಸಲು ಎರಡೂ ಕಡೆಯವರಿಗೆ ಚೌಕಟ್ಟನ್ನು ಒದಗಿಸುತ್ತದೆ ಎಂದು ಸಚಿವಾಲಯ ತಿಳಿಸಿದೆ. ಜಾಗತಿಕ ಮಾರುಕಟ್ಟೆಯಲ್ಲಿ ಎಂಎಸ್‌ಎಂಇ ಭಾಗವಹಿಸುವಿಕೆಯನ್ನು ಸುಧಾರಿಸುವುದಕ್ಕೆ ಸಂಬಂಧಿಸಿದಂತೆ ಎರಡು ದೇಶಗಳ ನಡುವೆ ವಿಚಾರ ವಿನಿಮಯಕ್ಕೆ ಒಪ್ಪಂದ ಅವಕಾಶ ಕಲ್ಪಿಸುತ್ತದೆ. ಇದೇ ವೇಳೆ ಮಹಿಳಾ ಉದ್ಯಮಿಗಳಿಗೆ ಅಧಿಕಾರ ನೀಡಲು ಮತ್ತು ಉಭಯ ದೇಶಗಳ ಮಹಿಳಾ-ಮಾಲೀಕತ್ವದ ಸಣ್ಣ ವ್ಯವಹಾರಗಳ ನಡುವೆ ವ್ಯಾಪಾರ ಪಾಲುದಾರಿಕೆಯನ್ನು ಸುಗಮಗೊಳಿಸಲು ಸಹ ಒಪ್ಪಂದ ನೆರವಾಗಲಿದೆ.

<><*<><>*><>

ರಕ್ಷಣಾ ಸಂಶೋಧನೆ ಮತ್ತು ಅಭಿವೃದ್ಧಿ ಸಂಸ್ಥೆ - ಡಿಆರ್‌ಡಿಒ ಭಾರತೀಯ ವಾಯುಪಡೆಯ ಸು-೩೦ ಎಂಕೆ- ಐ ವೇದಿಕೆಯಿಂದ ಲಾಂಗ್ ರೇಂಜ್ ಗ್ಲೈಡ್ ಬಾಂಬ್ ಗೌರವ್‌ನ ಮೊದಲ ಹಾರಾಟ ಪರೀಕ್ಷೆಯನ್ನು ಯಶಸ್ವಿಯಾಗಿ ನಡೆಸಿದೆ. ಒಡಿಶಾ ಕರಾವಳಿಯಲ್ಲಿ ಪರೀಕ್ಷೆ ನಡೆಸಲಾಯಿತು. ವಾಯು ಉಡಾವಣೆಯಾದ ಗೌರವ್ ಒಂದು ಸಾವಿರ ಕಿಲೋಗ್ರಾಂಗಳ ವರ್ಗದ ಗ್ಲೈಡ್ ಬಾಂಬ್ ಆಗಿದ್ದು, ದೂರದ ಗುರಿಗಳನ್ನು ಹೊಡೆಯುವ ಸಾಮರ್ಥ್ಯವನ್ನು ಹೊಂದಿದೆ ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಇದನ್ನು ಹೈದರಾಬಾದ್‌ನ ರಿಸರ್ಚ್ ಸೆಂಟರ್ ಇಮಾರತ್, ಸ್ಥಳೀಯವಾಗಿ ವಿನ್ಯಾಸ ಮತ್ತು ಅಭಿವೃದ್ಧಿಪಡಿಸಿದೆ. ಹಾರಾಟದ ಪರೀಕ್ಷೆಯ ಸಮಯದಲ್ಲಿ, ಗ್ಲೈಡ್ ಬಾಂಬ್ ಲಾಂಗ್ ವೀಲರ್ಸ್ ದ್ವೀಪದಲ್ಲಿ ಸ್ಥಾಪಿಸಲಾದ ಗುರಿಯನ್ನು ನಿಖರತೆಯೊಂದಿಗೆ ಹೊಡೆದುರುಳಿಸಿದೆ. ಯಶಸ್ವಿ ಹಾರಾಟ ಪರೀಕ್ಷೆಗಾಗಿ ರಕ್ಷಣಾ ಸಚಿವ ರಾಜನಾಥ್ ಸಿಂಗ್ ಅವರು, ಡಿಆರ್‌ಡಿಒ ಮತ್ತು ಐಎಎಫ್ ಅನ್ನು ಅಭಿನಂದಿಸಿದ್ದಾರೆ. ಸಶಸ್ತ್ರ ಪಡೆಗಳ ಸಾಮರ್ಥ್ಯವನ್ನು ಮತ್ತಷ್ಟು ಬಲಪಡಿಸಲು ದೇಶೀಯ ರಕ್ಷಣಾ ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸುವ ದೇಶದ ಪ್ರಯತ್ನದಲ್ಲಿ ಇದು ಪ್ರಮುಖ ಮೈಲಿಗಲ್ಲು ಎಂದು ಅವರು ಬಣ್ಣಿಸಿದ್ದಾರೆ.

<><*<><>*><>

ಒಲಿಂಪಿಕ್ಸ್ ಫೈನಲ್ ಪಂದ್ಯದಿಂದ ಅನರ್ಹಗೊಳಿಸುವಿಕೆ ಪ್ರಶ್ನಿಸಿ ವಿನೇಶ್ ಫೋಗಟ್ ಸಲ್ಲಿಸಿದ್ದ ಮೇಲ್ಮನವಿಯ ತೀರ್ಪನ್ನು ಕ್ರೀಡೆಗಾಗಿ ಇರುವ ಆರ್ಬಿಟ್ರೇಷನ್ ಕೋರ್ಟ್ - ಸಿಎಎಸ್‌ನ ತಾತ್ಕಾಲಿಕ ವಿಭಾಗವು ಮತ್ತೊಮ್ಮೆ ಮುಂದೂಡಿದೆ. ಆಗಸ್ಟ್ ೧೬ರಂದು ರಾತ್ರಿ ೯.೩೦ಕ್ಕೆ ನಿರ್ಧಾರ ಪ್ರಕಟಿಸುವುದಾಗಿ ತಿಳಿಸಿದೆ. ಇದಕ್ಕೂ ಮುನ್ನ ನಿನ್ನೆ ರಾತ್ರಿ ಸಿಎಎಸ್ ತೀರ್ಪು ಪ್ರಕಟವಾಗಬೇಕಿತ್ತು. ಭಾರತದ ಮಹಿಳಾ ಕುಸ್ತಿಪಟು ವಿನೇಶ್ ಫೋಗಟ್ ಅವರನ್ನು ಪ್ಯಾರಿಸ್‌ನಲ್ಲಿ ಇತ್ತೀಚೆಗೆ ಮುಕ್ತಾಯಗೊಂಡ ಒಲಿಂಪಿಕ್ ಕ್ರೀಡಾಕೂಟದಲ್ಲಿ ಫೈನಲ್ ಪಂದ್ಯದಂದು ಬೆಳಗ್ಗೆ ೧೦೦ ಗ್ರಾಂ ಅಧಿಕ ತೂಕ ಹೊಂದಿದ್ದರಿಂದ ಪಂದ್ಯದಿಂದ ಅನರ್ಹಗೊಳಿಸಲಾಗಿತ್ತು. ಫೋಗಟ್ ತಮ್ಮನ್ನು ಅನರ್ಹ ಗೊಳಿಸಿದ್ದರ ವಿರುದ್ಧ ಸಿಎಎಸ್‌ಗೆ ಮೇಲ್ಮನವಿ ಸಲ್ಲಿಸಿ ಬೆಳ್ಳಿ ಪದಕಕ್ಕಾಗಿ ಮನವಿ ಮಾಡಿದ್ದರು.

<><*<><>*><>

ವಕ್ಫ್ ತಿದ್ದುಪಡಿ ವಿಧೇಯಕ-೨೦೨೪ ರ ಜಂಟಿ ಸಮಿತಿಯ ಅಧ್ಯಕ್ಷರನ್ನಾಗಿ ಬಿಜೆಪಿ ಸಂಸದ ಜಗದಾಂಬಿಕಾ ಪಾಲ್ ಅವರನ್ನು ಲೋಕಸಭೆಯ ಸ್ಪೀಕರ್ ಓಂ ಬಿರ್ಲಾ ನೇಮಿಸಿದ್ದಾರೆ. ವಿಧೇಯಕದ ಕುರಿತು ಹೆಚ್ಚಿನ ಪರಿಶೀಲನೆಗಾಗಿ ಮೂವತ್ತೊಂದು ಸದಸ್ಯರ ಸಮಿತಿಯನ್ನು ರಚಿಸಲಾಗಿದೆ. ಇತ್ತೀಚೆಗೆ ಮುಕ್ತಾಯಗೊಂಡ ಸಂಸತ್ತಿನ ಬಜೆಟ್ ಅಧಿವೇಶನದಲ್ಲಿ ವಿಧೇಯಕವನ್ನು ಲೋಕಸಭೆಯಲ್ಲಿ ಮಂಡಿಸಲಾಯಿತು ಮತ್ತು ಅದನ್ನು ಜಂಟಿ ಸಂಸದೀಯ ಸಮಿತಿಗೆ ಕಳುಹಿಸಲಾಯಿತು. ಸಂಸತ್ತಿನ ಚಳಿಗಾಲದ ಅಧಿವೇಶನದ ಮುನ್ನ ಸಮಿತಿಯು ತನ್ನ ವರದಿಯನ್ನು ಸಲ್ಲಿಸಲಿದೆ.

<><*<><>*><>

ರಾಷ್ಟ್ರೀಯ ಅಂತರಿಕ್ಷಾ ದಿನಾಚರಣೆಯನ್ನು ಇದೇ ಆಗಸ್ಟ್ ೨೩ ರಂದು ದೇಶಾದ್ಯಾಂತ ಆಚರಿಸಲಾಗುತಿದ್ದು, ಅಂದಿನ ದಿನವನ್ನು ನಾವು ಬಾಹ್ಯಕಾಶ ತಂತ್ರಜ್ಞಾನ ಕ್ಷೇತ್ರದಲ್ಲಿ ಸಾಧಿಸಬೇಕಾದ ಪ್ರಗತಿಯ ಚಿಂತನೆಯಲ್ಲಿ ವಿನಿಯೋಗಸಬೇಕು ಎಂದು ಯು.ಆರ್. ರಾವ್ ಉಪಗ್ರಹ ಕೇಂದ್ರದ ನಿರ್ದೇಶಕ ಎಂ. ಶಂಕರಂ ಹೇಳಿದ್ದಾರೆ. ಬೆಂಗಳೂರಿನ ಭಾರತೀಯ ವಿಜ್ಞಾನ ಸಂಸ್ಥೆ-ಐಐಎಸ್‌ಸಿ ಯಲ್ಲಿ ನಿನ್ನೆ ಏರ್ಪಡಿಸಿದ್ದ ಬಾಹ್ಯಕಾಶ ದಿನಾಚರಣೆಯ ಸ್ಮರಣಾರ್ಥ ಕಾರ್ಯಗಾರದಲ್ಲಿ ಅವರು, ಮಾತನಾಡಿದರು. ೨೦೩೫ರ ವೇಳೆಗೆ ಭಾರತೀಯ ಅಂತರಿಕ್ಷಾ ಕೇಂದ್ರವನ್ನು ಸ್ಥಾಪಿಸಲು ಮತ್ತು ೨೦೪೦ರ ವೇಳೆಗೆ ಗಗನಯಾತ್ರಿಯನ್ನು ಚಂದ್ರನ ಗ್ರಹಕ್ಕೆ ಕಳುಹಿಸಿ ನಂತರ ಭೂಮಿಗೆ ಮರಳುವಂತೆ ಯೋಜನೆ ಹಾಕಿಕೊಂಡಿದೆ ಎಂದು ತಿಳಿಸಿದರು. ನೈಸರ್ಗಿಕ ವಿಕೋಪದ ನಿರ್ವಹಣೆ, ಹವಾಮಾನ ಮುನ್ಸೂಚನೆ, ದೂರಸಂವೇದಿ ಉಪಕ್ರಮಗಳು ಹಾಗೂ ಜಿಪಿಎಸ್ ವ್ಯವಸ್ಥೆಯನ್ನು ಇಸ್ರೋದ ಉಪಗ್ರಹಗಳು ಪೂರೈಸುತ್ತಿವೆ ಎಂದು ಶಂಕರಂ ಹೇಳಿದರು.

**<><*<><>*><>**

ಕೇಂದ್ರ ಕಲ್ಲಿದ್ದಲು ಮತ್ತು ಗಣಿ ಸಚಿವ ಜಿ.ಕಿಶನ್ ರೆಡ್ಡಿ ಅವರು ಗ್ರಾಮೀಣ ಪ್ರದೇಶದಲ್ಲಿ ವಸತಿ ರಹಿತ ಬಡವರನ್ನು ಗುರುತಿಸಲು ಕೇಂದ್ರವು ನಡೆಸಲಿರುವ ರಾಷ್ಟ್ರವ್ಯಾಪಿ ಸಮೀಕ್ಷೆಗೆ ತೆಲಂಗಾಣ ಸರ್ಕಾರವು ಕೈಜೋಡಿಸಬೇಕು ಎಂದು ಸಲಹೆ ನೀಡಿದ್ದಾರೆ. ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಅವರಿಗೆ ಪತ್ರ ಬರೆದಿರುವ ಕೇಂದ್ರ ಸಚಿವರು, ಅಂತಹ ವ್ಯಕ್ತಿಗಳ ಪಟ್ಟಿಯನ್ನು ಸಿದ್ಧಪಡಿಸಿದರೆ ಕೇಂದ್ರವು ಗ್ರಾಮೀಣ ಪ್ರದೇಶಗಳಿಗೆ ಪ್ರಧಾನ ಮಂತ್ರಿ ಆವಾಸ್ ಯೋಜನೆಯನ್ನು ವಿಸ್ತರಿಸಬಹುದು. ೨೦೧೧ರಲ್ಲಿ ನಡೆಸಲಾದ ಸಾಮಾಜಿಕ-ಆರ್ಥಿಕ ಜಾತಿ ಗಣತಿಯಿಂದ ಶಾಶ್ವತ ನಿರೀಕ್ಷಣಾ ಪಟ್ಟಿಯಲ್ಲಿರುವ ಜನರಿಗೆ ಮನೆಗಳನ್ನು ಹಂಚಿಕೆ ಮಾಡಲು ಕೇಂದ್ರವು ನಿರ್ಧರಿಸಿದೆ ಎಂದು ಸಚಿವರು ಹೇಳಿದರು. ಹಿಂದಿನ ಬಿಆರ್‌ಎಸ್ ಸರ್ಕಾರದಂತೆ ತೆಲಂಗಾಣ ರಾಜ್ಯವು ಮನೆರಹಿತ ಬಡವರ ಪಟ್ಟಿಯನ್ನು ನೀಡಲು ಸಾಧ್ಯವಾಗಲಿಲ್ಲ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಅಪರಾಹ್ನ ೧.೧೦ ಕ್ಕೆ **<>*><>**